# <u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1279 |
| ಸದಸ್ಯರ ಹೆಸರು | ಶ್ರೀ ಎನ್.ರವಿಕುಮಾರ್ |
| ಉತ್ತರಿಸುವ ದಿನಾಂಕ | 19.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2022-23ನೇ ಸಾಲಿನ ಆಯವ್ಯಯದಲ್ಲಿ ಮುಜರಾಯಿ ಇಲಾಖೆ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುವ ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲು ಕ್ರಮ ವಹಿಸಲಾಗುವುದಾಗಿ ಘೋಷಿಸಿದ್ದು, ಅದರಂತೆ ಇದುವರೆಗೆ ಎಷ್ಟು ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲಾಗಿದೆ;<br>( ಜಿಲ್ಲಾವಾರು ವಿವರ ನೀಡುವುದು) | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-367ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.<br><br>**"ದೇವಾಲಯಗಳನ್ನು ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಕೇಳಿ ಬರುತ್ತಿದೆ. ಭಕ್ತಾದಿಗಳ ಈ ಬೇಡಿಕೆಯನ್ನು ಪರಿಗಣಿಸಿ, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ, ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲಾಗುವುದು."**<br><br>ಈ ಕುರಿತು ಕಾನೂನಾತ್ಮಕವಾಗಿ ಪರಿಶೀಲಿಸಿ ಆದೇಶ ಹೊರಡಿಸಿರುವುದಿಲ್ಲ. |
| ಆ) | ದೇವಸ್ಥಾನಗಳಿಗೆ ಯಾವ ರೀತಿಯಲ್ಲಿ ಸ್ವಾಯತ್ತತೆ ನೀಡಲಾಗುತ್ತದೆ; ಸಂಪೂರ್ಣ ಸ್ವಾಯತ್ತತೆ ಎಂದರೇನು; ಸರ್ಕಾರದ ಯಾವುದೇ ರೀತಿಯ ಹಸ್ತಕ್ಷೇಪವು ದೇವಸ್ಥಾನದ ದೈನಂದಿನ ಪೂಜೆ ವ್ಯವಸ್ಥೆಗಳಲ್ಲಿ ಇರದಿರುವುದನ್ನು ಸ್ವಾಯತ್ತತೆ ಎಂದು ಕರೆಯಲಾಗಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ಧಾರ್ಮಿಕ ಇಲಾಖಾ ವ್ಯಾಪ್ತಿಯ ಎ ಮತ್ತು ಬಿ ವರ್ಗದ ಧಾರ್ಮಿಕ ಸಂಸ್ಥೆಗಳಲ್ಲಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ರ ಕಾಯ್ದೆ ಕಲಂ 25 ರನ್ವಯ ಸ್ಥಳೀಯರನ್ನೊಳಗೊಂಡಂತೆ 09 ಜನ ಸದಸ್ಯರ ವ್ಯವಸ್ಥಾಪನಾ ಸಮಿತಿ ರಚಿಸಲಾಗುತ್ತದೆ.<br><br>ಈ ಒಂಬತ್ತು ಸದಸ್ಯರ ಪೈಕಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಂಡು, ದೇವಾಲಯದ ದೈನಂದಿನ ಪೂಜೆ, ನಿರ್ವಹಣೆ, ವಾರ್ಷಿಕ ಆಯವ್ಯಯ ಮತ್ತು ಮೂಲಭೂತ ಸೌಕರ್ಯ ಇತ್ಯಾದಿಗಳ ಬಗ್ಗೆ ಚರ್ಚಿಸಿ, **ನಿರ್ಣಯ ಕೈಗೊಳ್ಳಲು ಸಮಿತಿಯು ಸ್ವತಂತ್ರವಾಗಿರುತ್ತದೆ.** |
| ಇ) | ದೇವಸ್ಥಾನಗಳ ಆಡಳಿತ ವ್ಯವಸ್ಥೆ ಹಾಗೂ ದೈನಂದಿನ ಕಾರ್ಯಭಾರಗಳನ್ನು ಸದರಿ ದೇವಸ್ಥಾನದ ಭಕ್ತರ ಅಧೀನಕ್ಕೆ ನೀಡುವ ಕುರಿತು ಸರ್ಕಾರದ ನಿಲುವೇನು; | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಕಲಂ 58ರಲ್ಲಿ ಈ ಅಧಿನಿಯಮದ ಅಡಿಯಲ್ಲಿ ಅಧಿಕಾರಗಳನ್ನು ಚಲಾಯಿಸುತ್ತಿರುವ ಅಥವಾ ಪ್ರಕಾರ್ಯಗಳನ್ನು ನಿರ್ವಹಿಸುತ್ತಿರುವ ಆಯುಕ್ತರು, ಉಪ ಆಯುಕ್ತರು ಮತ್ತು ಸಹಾಯಕ ಆಯುಕ್ತರು ಮತ್ತು ಇತರ ಪ್ರತಿಯೊಬ್ಬ ವ್ಯಕ್ತಿಯು, ಯಾವ ಅಧಿಸೂಚಿತ ಸಂಸ್ಥೆ ಅಥವಾ ಘೋಷಿತ ಸಂಸ್ಥೆಯ ಸಂಬಂಧದಲ್ಲಿ ಅಂಥ ಅಧಿಕಾರಗಳನ್ನು ಚಲಾಯಿಸಲಾಗುತ್ತಿದೆಯೋ ಅಂಥ ಸಂಸ್ಥೆಗೆ ಸೂಕ್ತವಾದ ಸಂಪ್ರದಾಯ, ಆಚರಣೆ ಸಮಾರಂಭ ಮತ್ತು ಪದ್ಧತಿಗಳಲ್ಲಿ **ಹಸ್ತಕ್ಷೇಪ ಮಾಡತಕ್ಕದ್ದಲ್ಲ ಮತ್ತು ಅವುಗಳನ್ನು ಪಾಲಿಸತಕ್ಕದ್ದು ಎಂದಿರುತ್ತದೆ.** |
| ಈ) | ಪ್ರತೀ ದೇವಸ್ಥಾನಕ್ಕೆ ಅದರ ಭಕ್ತರನ್ನೇ ಸದಸ್ಯರನ್ನಾಗಿ ನೊಂದಾಯಿಸಲು ಅವಕಾಶ ಮಾಡಿಕೊಟ್ಟು ಆ ಸದಸ್ಯರ ಮೂಲಕ ಚುನಾಯಿತ ಸಮಿತಿಯನ್ನು ದೇವಸ್ಥಾನದ ದೈನಂದಿನ ಆಡಳಿತ ನೋಡಿಕೊಳ್ಳಲು ಅವಕಾಶ ಕಲ್ಪಿಸುವ ಮೂಲಕ ದೇವಸ್ಥಾನಗಳನ್ನು ಸರ್ಕಾರಿ ಆಡಳಿತದಿಂದ ಮುಕ್ತಗೊಳಿಸುವ ಕುರಿತು ಸರ್ಕಾರದ ನಿಲುವೇನು? | ಈ ಹಿನ್ನೆಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳ ಆಚರಣೆ ಸಮಾರಂಭ ಮತ್ತು ಪದ್ಧತಿಗಳಲ್ಲಿ ಯಾವುದೇ **ಹಸ್ತಕ್ಷೇಪಕ್ಕೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಕಲಂ 58ರಡಿಯಲ್ಲಿ** ಆಸ್ಪದವಿರುವುದಿಲ್ಲ. |

ಸಂಖ್ಯೆ: ಕಂಇ 79 ಮುಸಪು 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು